Akashvani : Bangalore
Regional Bulletin In Kannada
12.11.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನಾಳೆ ಶಿಗ್ಗಾಂವಿ, ಚನ್ನಪಟ್ಟಣ, ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಉಪಚುನಾವಣೆ; ೫೨೪ ಮತಗಟ್ಟೆಗಳಿಗೆ ವೆಬ್‌ಕ್ಯಾಸ್ಟಿಂಗ್ ವ್ಯವಸ್ಥೆ
- ಮೈಸೂರಿನ ಎಚ್.ಡಿ.ಕೋಟೆಯಲ್ಲಿ ೪೪೩ ಕೋಟಿ ರೂಪಾಯಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶಂಕುಸ್ಥಾಪನೆ
- ಆಯುಷ್ಮಾನ್ ಭಾರತ್ ಯೋಜನೆಯಿಂದ ೧೦ ಕೋಟಿಗೂ ಅಧಿಕ ಕುಟುಂಬಗಳಿಗೆ ಆರೋಗ್ಯ ಭದ್ರತೆ - ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ
- ಬೆಂಗಳೂರು-ತುಮಕೂರು ಷಟ್ಪಥ ರಸ್ತೆ ಕಾಮಗಾರಿ ತ್ವರಿತವಾಗಿ ಪೂರ್ಣಗೊಳಿಸುವಂತೆ ಕೇಂದ್ರ ಸಚಿವ ಸೋಮಣ್ಣ ಸೂಚನೆ
- ೫. ಅಖಿಲ ಭಾರತ ಅಂಚೆ ಬ್ಯಾಡ್ಮಿಂಟನ್ ಪಂದ್ಯಾವಳಿ; ಗುರುವಾರ ಏಳು ಫೈನಲ್ ಪಂದ್ಯಗಳು ನಿಗದಿ

<><*<><>*><>

ಶಿಗ್ಗಾಂವಿ, ಸಂಡೂರು, ಚನ್ನಪಟ್ಟಣ ಕ್ಷೇತ್ರದಲ್ಲಿ ನಾಳೆ ವಿಧಾನಸಭೆ ಉಪಚುನಾವಣೆಯ ಮತದಾನ ನಡೆಯಲಿದೆ. ಬೆಳಗ್ಗೆ ೭ ರಿಂದ ಸಂಜೆ ೬ರವರೆಗೆ ಮತದಾನ ನಡೆಯಲಿದೆ. ಮುಕ್ತ ಹಾಗೂ ನ್ಯಾಯಸಮ್ಮತ ಮತದಾನಕ್ಕೆ ಚುನಾವಣಾ ಆಯೋಗ ಎಲ್ಲಾ ವ್ಯವಸ್ಥೆ ಮಾಡಿದೆ. ಮತದಾನದ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಕಟ್ಟೆಚ್ಚರವಹಿಸಲಾಗಿದ್ದು, ಮೂರು ಕ್ಷೇತ್ರಗಳಲ್ಲೂ ಬಿಗಿ ಭದ್ರತೆ ಕಲ್ಪಿಸಲಾಗಿದೆ. ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ಪೊಲೀಸರನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದೆ. ಮೂರು ಕ್ಷೇತ್ರಗಳಲ್ಲಿ ಮತದಾನ ಕಾರ್ಯಕ್ಕೆ ನಿಯೋಜನೆಯಾದ ಅಧಿಕಾರಿಗಳು ಮತ್ತು ಸಿಬ್ಬಂದಿ ಮತಗಟ್ಟೆಗೆ ತೆರಳಿದ್ದಾರೆ. ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆ ಹಿನ್ನೆಲೆಯಲ್ಲಿ ಮತದಾನದ ಪ್ರಮಾಣವನ್ನು ಹೆಚ್ಚಿಸಲು ವಿಶೇಷ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ಷಯ್ ಶ್ರೀಧರ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಅಕ್ಷಯ್ ಶ್ರೀಧರ್

ಬಳ್ಳಾರಿ ಜಿಲ್ಲೆಯ ಸಂಡೂರಿನಲ್ಲಿ ಮತದಾನಕ್ಕೆ ಅಗತ್ಯವಾದ ಸಿದ್ದತೆ ನಡೆದಿದೆ. ಸಂಡೂರಿನ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಸ್ಟರಿಂಗ್ ನಡೆದಿದ್ದು, ಮತಯಂತ್ರ, ಕಂಟ್ರೋಲ್ ಯುನಿಟ್, ವಿವಿ ಪ್ಯಾಡ್, ಶಾಹಿ, ಮತದಾರ ಪಟ್ಟಿ ಸೇರಿದಂತೆ ಇನ್ನಿತರ ಸಾಮಾಗ್ರಿಗಳನ್ನು ತೆಗೆದುಕೊಂಡು ಸಿಬ್ಬಂದಿ ತೆರಳಿದ್ದಾರೆ. ಸಂಡೂರು ಕ್ಷೇತ್ರದಲ್ಲಿ ೬೦ ಅತಿ ಸೂಕ್ಷ್ಮ ಸೇರಿದಂತೆ ೨೫೩ ಮತಗಟ್ಟೆ ಸ್ಥಾಪಿಸಲಾಗಿದೆ. ೧೨೭ ಕಡೆ ವೆಬ್ ಕ್ಯಾಸ್ಟಿಂಗ್ ನಡೆಸಲು ಆಯೋಗ ನಿರ್ಧರಿಸಿದೆ. ಚನ್ನಪಟ್ಟಣದಲ್ಲೂ ನಾಳೆ ಮತದಾನಕ್ಕೆ ಆಯೋಗ ಸಕಲ ಸಿದ್ಧತೆ ನಡೆಸಿದೆ. ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ೨೭೬ ಮತಗಟ್ಟೆಗಳನ್ನು ರಚಿಸಲಾಗಿದ್ದು, ಎಲ್ಲಾ ಮತಗಟ್ಟೆಗಳಿಗೆ ವೆಬ್‌ಕಾಸ್ಟಿಂಗ್‌ಗೆ ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ೧೧೯ ಸೂಕ್ಷ್ಮ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ೧೧೯ ಮೈಕ್ರೋ ವೀಕ್ಷಕರನ್ನು ನಿಯೋಜಿಸಲಾಗಿದೆ. ೮ ಅರೆಸೇನಾಪಡೆಗಳು ಜಿಲ್ಲೆಗೆ ಆಗಮಿಸಿದ್ದು, ಬಿಗಿ ಬಂದೋಬಸ್ತ್ ಏರ್ಪಡಿಸಲಾಗಿದೆ. ೫೪ ಕ್ಲಸ್ಟರ್ ಮತಗಟ್ಟೆಗಳಿಗೆ ಸಹಾಯಕ ಸಬ್‌ಇನ್ಸ್‌ಪೆಕ್ಟರ್‌ಗಳನ್ನು ಭದ್ರತೆಗೆ ನಿಯೋಜಿಸಲಾಗಿದೆ. ಶಿಗ್ಗಾಂವಿಯಲ್ಲಿ ಒಟ್ಟು ೨ ಲಕ್ಷದ ೩೭ ಸಾವಿರದ ೫೨೫ ಮತದಾರರಿದ್ದಾರೆ. ಸಂಡೂರಿನಲ್ಲಿ ೨ ಲಕ್ಷದ ೩೬ ಸಾವಿರದ ೩೪೯ ಹಾಗೂ ಚನ್ನಪಟ್ಟಣದಲ್ಲಿ ೨

ಲಕ್ಷದ ೩೨ ಸಾವಿರದ ೯೪೨ ಮತದಾರರಿದ್ದಾರೆ. ಶಿಗ್ಗಾಂವಿಯಲ್ಲಿ ೧೨೧, ಸಂಡೂರಿನಲ್ಲಿ ೧೨೭, ಚನ್ನಪಟ್ಟಣದಲ್ಲಿ ೨೭೬ ಮತ ಕೇಂದ್ರಗಳಿಗೆ ವೆಬ್‌ಕ್ಯಾಸ್ಟಿಂಗ್ ಅಳವಡಿಸಲಾಗಿದೆ.

<><*<><>*><>

ವಾಲ್ಮೀಕಿ, ವ್ಯಾಸ, ಕನಕದಾಸ ಇವರೆಲ್ಲರೂ ಶೂದ್ರ ಹಾಗೂ ದಲಿತ ಸಮುದಾಯದವರಾಗಿದ್ದು ಮೇಲ್ವರ್ಗಕ್ಕೆ ಮಾತ್ರ ಶಿಕ್ಷಣ ಎನ್ನುವುದು ತಪ್ಪು ಕಲ್ಪನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಮೈಸೂರು ಜಿಲ್ಲಾಡಳಿತ ವತಿಯಿಂದ ಆಯೋಜಿಸಿದ್ದ  ಹೆಚ್.ಡಿ.ಕೋಟೆ ವಿಧಾನಸಭಾ ಕ್ಷೇತ್ರದಲ್ಲಿನ ೪೪೩ ಕೋಟಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿ, ಮಾತನಾಡಿದ ಅವರು ವಿದ್ಯೆ ಯಾರೊಬ್ಬರ ಸ್ವತ್ತೂ ಅಲ್ಲ ಎಂದು ಹೇಳಿದ್ದಾರೆ. ರಾಜ್ಯ ಸರ್ಕಾರದಲ್ಲಿ ಹಣ ಇಲ್ಲ ಎಂದು ಅಪಪ್ರಚಾರ ನಡೆಸಲಾಗುತ್ತಿದೆ. ನಿಧಿ ಇಲ್ಲದಿದ್ದರೆ ಈ ೪೪೩ ಕೋಟಿ ಎಲ್ಲಿಂದ ಬಂತು? ಯಾವುದಾದರೂ ರಾಜ್ಯ ಸರ್ಕಾರಿ ನೌಕರರಿಗೆ ವೇತನ ನಿಂತಿದೆಯಾ ಎಂದು ಪ್ರಶ್ನಿಸಿದರು. ರಾಜ್ಯದ ಕೋಟಿ ಫಲಾನುಭವಿಗಳು ಐದೂ ಗ್ಯಾರಂಟಿ ಯೋಜನೆಗಳ ಫಲವನ್ನು ಪ್ರತೀ ತಿಂಗಳೂ ಪಡೆಯುತ್ತಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ.

<><*<><>*><>

ಕಳೆದ ಒಂದು ದಶಕದಲ್ಲಿ ಭಾರತದ ಆರೋಗ್ಯ ಕ್ಷೇತ್ರದಲ್ಲಿ ಕ್ರಾಂತಿಕಾರಿ ಬದಲಾವಣೆಯಾಗಿದೆ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಬೆಂಗಳೂರಿನಲ್ಲಿ ಅಭಿಪ್ರಾಯಪಟ್ಟಿದ್ದಾರೆ. ಖಾಸಗಿ ವೈದ್ಯಕೀಯ ಕಾಲೇಜಿನ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಆಯುಷ್ಮಾನ್ ಭಾರತ್ ವಿಶ್ವದ ಅತಿ ದೊಡ್ಡ ಆರೋಗ್ಯ ಉಪಕ್ರಮವಾಗಿದೆ ಎಂದು ಹೇಳಿದ್ದಾರೆ.  ಆಯುಷ್ಮಾನ್ ಭಾರತ್ ರಾಷ್ಟ್ರೀಯ ಆರೋಗ್ಯ ಸಂರಕ್ಷಣಾ ಯೋಜನೆಯಾಗಿದ್ದು, ೧೦ ಕೋಟಿಗೂ ಹೆಚ್ಚು ಬಡ ಮತ್ತು ದುರ್ಬಲ ಕುಟುಂಬಗಳಿಗೆ ಆರೋಗ್ಯ ಭದ್ರತೆ ನೀಡಲಿದೆ ಎಂದು ತಿಳಿಸಿದ್ದಾರೆ.

<><*<><>*><>

ಬೆಂಗಳೂರು- ತುಮಕೂರು ಹೆದ್ದಾರಿಯ ೬ ಪಥದ ರಸ್ತೆ ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ಮುಗಿಸುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಕೇಂದ್ರದ ರೈಲ್ವೆ ಖಾತೆಯ ರಾಜ್ಯ ಸಚಿವ ಸೋಮಣ್ಣ  ಸೂಚಿಸಿದ್ದಾರೆ. ಇದೇ ವೇಳೆ, ಸರ್ವೀಸ್ ರಸ್ತೆಗಳನ್ನು ಸರಿಯಾಗಿ ನಿರ್ವಹಿಸಲು ನಿರ್ದೇಶನ ನೀಡಿದ್ದಾರೆ.  ೨೦೧೬ರಲ್ಲಿ ಆರಂಭವಾದ ಕಾಮಗಾರಿ ಕಳೆದ ೮ ವರ್ಷಗಳಿಂದ ಕುಂಟುತ್ತಾ ಸಾಗಿದ್ದು, ನೆಲಮಂಗಲ ಟೋಲ್ ನಿಂಧ ತುಮಕೂರು ವರಗೆ ೪೫ ಕಿಮೀ ಕಾಮಗಾರಿ ನಡೆಯುತ್ತಿದೆ. ಒಟ್ಟು ೨೦೪೮ ಕೋಟಿ ರೂಪಾಯಿಗಳನ್ನು ಕೇಂದ್ರ ಸರ್ಕಾರ ಭರಿಸಿದ್ದರೂ  ೬ ತಿಂಗಳಿಂದ ಕಾಮಗಾರಿ ಸ್ಥಗಿತಗೊಂಡಿತ್ತು. ಇಂದು ಕಾಮಗಾರಿಗೆ ಮತ್ತೆ ಚಾಲನೆ ದೊರೆತಿದೆ.

<><*<><>*><>

ಸಹಕಾರಿ ಸಂಸ್ಥೆಗಳಿಗೆ ರಿಯಾಯಿತಿ ದರದಲ್ಲಿ ನೀಡುವ ಸಾಲದ ಮೊತ್ತವನ್ನು ಕಡಿಮೆ ಮಾಡುವುದರಿಂದ ಕೃಷಿ ಕ್ಷೇತ್ರಕ್ಕೆ ಹಿನ್ನಡೆಯಾಗಲಿದೆ ಎಂದು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಅಭಿಪ್ರಾಯಪಟ್ಟಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮೊದಲಿನ ಪ್ರಮಾಣದಲ್ಲೇ ಸಾಲ ನೀಡಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದ್ದಾರೆ.  ರಾಜ್ಯದಲ್ಲಿ ಸುಮಾರು ೬೩ ಲಕ್ಷ ರೈತರಿದ್ದು, ಈ ಪೈಕಿ ಸುಮಾರು ೩೦ ಲಕ್ಷ ರೈತರು ಕೃಷಿ ಸಾಲಕ್ಕೆ ಡಿಸಿಸಿ ಬ್ಯಾಂಕುಗಳನ್ನು ಅವಲಂಬಿಸಿದ್ದಾರೆ. ನಬಾರ್ಡ್ ರಿಯಾಯಿತಿ ದರದ ಸಾಲದ ಮೊತ್ತ, ಕಡಿಮೆ ಮಾಡಿದರೆ ಡಿಸಿಸಿ ಬ್ಯಾಂಕುಗಳ

ಕೃಷಿ ಸಾಲ, ವಿತರಣೆಯ ಸಾಮರ್ಥ್ಯ ಕಡಿಮೆಯಾಗಲಿದ್ದು, ಕೃಷಿ ಕ್ಷೇತ್ರದ ಹಿನ್ನಡೆಗೆ ಕಾರಣವಾಗಲಿದೆ ಎಂದು ತಿಳಿಸಿದ್ದಾರೆ.

<><*<><>*><>

ಮುಂಬರುವ ವಿಧಾನಸಭಾ ಅಧಿವೇಶನದಲ್ಲಿ ವಕ್ಫ್ ಭೂ ಕಬಳಿಕೆ, ವಾಲ್ಮೀಕಿ ನಿಗಮ ಮತ್ತು ಮುಡಾ ನಿವೇಶನ ಹಗರಣಗಳ ಮೇಲೆ ಚರ್ಚೆ ಕೈಗೆತ್ತಿಕೊಳ್ಳಲು ಬಿಜೆಪಿ ನಿರ್ಧರಿಸಿದೆ ಎಂದು ವಿಧಾನಸಭಾ ವಿರೋಧ ಪಕ್ಷದ ನಾಯಕ ಆರ್.ಅಶೋಕ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಕ್ಫ್ ಮೂಲಕ ರಾಜ್ಯ ಸರ್ಕಾರ ಜನರ ನೆಮ್ಮದಿ ಹಾಳು ಮಾಡಲು ಹೊರಟಿದೆ ಎಂದು ದೂರಿದ್ದಾರೆ. ಮುಡಾ ಪ್ರಕರಣದಲ್ಲಿ ಮೇಲ್ನೋಟಕ್ಕೆ ಮುಖ್ಯಮಂತ್ರಿಯವರ ೧೪ ನಿವೇಶನಗಳು ಮಾತ್ರ ಕಾಣುತ್ತಿವೆ. ಆದರೆ ಇಲ್ಲಿ ೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಅವ್ಯವಹಾರವಾಗಿರುವ ಬಗ್ಗೆ ಮಾಹಿತಿ ಇದೆ ಎಂದು ಹೇಳಿದ್ದಾರೆ.

<><*<><>*><>

ತುಮಕೂರು ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಡಿ ನಡೆಯುತ್ತಿರುವ ವಿದ್ಯಾರ್ಥಿ ನಿಲಯಗಳ ವ್ಯವಸ್ಥೆ ಹದಗೆಟ್ಟಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ್ ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಮುಖ್ಯಮಂತ್ರಿಗಳ ಭೇಟಿ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕೊರಟಗೆರೆಯ ಏಕಲವ್ಯ ವಸತಿ ಶಾಲೆಯಲ್ಲಿ ವಿದ್ಯಾರ್ಥಿಯೊಬ್ಬ ಸಾವಿಗೀಡಾಗಿರುವುದರ ಹಿಂದೆ ಅಧಿಕಾರಿಗಳ ವೈಫಲ್ಯ ಎದ್ದು ಕಾಣುತ್ತಿದೆ ಎಂದು ಹೇಳಿದ್ದಾರೆ. ಅಧಿಕಾರಿಗಳು ವಿದ್ಯಾರ್ಥಿ ನಿಲಯಗಳಿಗೆ ತಿಂಗಳಿಗೊಮ್ಮೆಯಾದರೂ ಭೇಟಿ ನೀಡಿ ಪರಿಶೀಲಿಸಬೇಕು ಸೂಚಿಸಿದ್ದಾರೆ. ಇಂತಹ ಅವ್ಯವಸ್ಥೆಯನ್ನು ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ.

<><*<><>*><>

ಮೈಸೂರಿನ ಚಾಮುಂಡಿ ವಿಹಾರ ಒಳಂಗಣ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ೩೮ನೇ ಅಖಿಲ ಭಾರತ ಅಂಚೆ ಬ್ಯಾಡ್ಮಿಂಟನ್ ಪಂದ್ಯಾವಳಿಯ ಮೂರನೇ ದಿನ ೯೩ ಸಿಂಗಲ್ಸ್, ಡಬಲ್ಸ್ ಪಂದ್ಯಗಳು ನಡೆದಿವೆ ಎಂದು ಬೆಂಗಳೂರು ವಲಯದ ಚೀಫ್ ಪೋಸ್ಟ್ ಮಾಸ್ಟರ್ ಮಂಜೇಶ್ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಇಂದು ಸಿಂಗಲ್ಸ್, ಡಬಲ್ಸ್ ಹಾಗೂ ಮಿಕ್ಸೆಡ್‌ಡಬಲ್ಸ್‌ನ ೯೩ ಪಂದ್ಯಗಳು ನಡೆದಿವೆ. ನಾಳೆ ೪೨ ಪಂದ್ಯಗಳು ನಡೆಯಲಿವೆ. ಇದೇ ೧೪ ರಂದು ಟೂರ್ನಿಯ ಕೊನೆಯ ದಿನವಾಗಿದ್ದು, ೭ ಫೈನಲ್ ಪಂದ್ಯಗಳನ್ನು ಆಯೋಜಿಸಲಾಗಿದೆ.

ಧ್ವನಿ; ಮಂಜೇಶ್

<><*<><>*><>

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಸಂಪೂರ್ಣವಾಗಿ ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೩೮ ಇಲಾಖೆಗಳಲ್ಲಿ ಭ್ರಷ್ಟಾಚಾರ ನಡೆದಿದ್ದು, ಬಿಜೆಪಿ ಇದೆಲ್ಲವನ್ನೂ ಬೆಳಕಿಗೆ ತರಲಿದೆ ಎಂದು ಹೇಳಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ರಾಜ್ಯದ ಸುಮಾರು ೪೦ ಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ನಡೆಸಿದ್ದು, ಅಪಾರ ಪ್ರಮಾಣದ ನಗದು ಆಸ್ತಿ ಪತ್ತೆಯಾಗಿದೆ. ಬೆಳಗಾವಿ, ಹಾವೇರಿ, ದಾವಣಗೆರೆ, ಕಲಬುರಗಿ, ರಾಮನಗರ, ಮೈಸೂರು, ಬೆಳಗಾವಿ, ಧಾರವಾಡದಲ್ಲಿ ದಾಳಿ ನಡೆದಿದೆ.

೨. ಕೊಪ್ಪಳ ಜಿಲ್ಲೆಯ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಭಾಗ್ಯನಗರ ಪಟ್ಟಣಕ್ಕೆ ಮುಂದಿನ ಶೈಕ್ಷಣಿಕ ವರ್ಷದಿಂದ ಪದವಿ ಕಾಲೇಜು ಸ್ಥಾಪಿಸಲು ಅನುಮತಿ ನೀಡುವಂತೆ ಉನ್ನತ ಶಿಕ್ಷಣ ಸಚಿವರಿಗೆ ಪತ್ರ ಬರೆಯುವ ಮೂಲಕ ಮನವಿ ಮಾಡಿಕೊಂಡಿದ್ದಾರೆ.

೩. ಮಂಡ್ಯ ಜಿಲ್ಲೆಯಿಂದ ರಫ್ತಾಗುವ ಸಂಭಾವ್ಯ ಬೆಳೆ ಉತ್ಪನ್ನಗಳನ್ನು ಪಟ್ಟಿ ಮಾಡಿ, ರಫ್ತು ಹೆಚ್ಚಾಗುವ ಉತ್ಪನ್ನಗಳಿಗೆ ಸಂಬಂಧಿಸಿದ ನವೀನ ಬೆಳೆಗಳನ್ನು ಬೆಳೆಯಲು ಜಾಗೃತಿ ಮೂಡಿಸುವಂತೆ ಜಿಲ್ಲಾಧಿಕಾರಿ ಡಾ. ಕುಮಾರ ಜಿಲ್ಲಾ ವಾಣಿಜ್ಯ ಹಾಗೂ ಕೈಗಾರಿಕಾ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

೪. ಚಿಕ್ಕಬಳ್ಳಾಪುರ ನಗರದ ಉದ್ಯಾನವನಗಳ ಸ್ವಚ್ಛತೆ ಮತ್ತು ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭೆ ಅಧ್ಯಕ್ಷ ಎ.ಗಜೇಂದ್ರ ತಿಳಿಸಿದ್ದಾರೆ.

೫. ದಡಾರ ಸಾಂಕ್ರಾಮಿಕ ರೋಗವಾಗಿದ್ದು, ಇದು ಒಬ್ಬರಿಂದ ಮತ್ತೊಬ್ಬರಿಗೆ ಬಹುಬೇಗ ಹರಡುತ್ತದೆ. ಮಕ್ಕಳು ಮೀಸಲ್ಸ್- ರುಬೆಲ್ಲಾ ಲಸಿಕೆಯಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸುವಂತೆ ಮಂಡ್ಯ ಜಿಲ್ಲಾಡಳಿತ ಸೂಚನೆ ನೀಡಿದೆ.

೬. ಕೊಪ್ಪಳ ಗಂಗಾವತಿ ತಾಲೂಕಿನ ವೆಂಕಟಗಿರಿ ಗ್ರಾಮದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನ ಸ್ಪಂದನ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ನಲೀನ್ ಅತುಲ್ ಗಿಡಗಳಿಗೆ ನೀರೆರೆಯುವ ಮೂಲಕ ಚಾಲನೆ ನೀಡಿದರು.

೭. ಕೊಡಗು ಜಿಲ್ಲೆಗೆ ಪ್ರತೀ ವರ್ಷ ೪೦ ರಿಂದ ೫೦ ಲಕ್ಷ ಪ್ರವಾಸಿಗರು ಭೇಟಿ ನೀಡುತ್ತಿದ್ದು, ಸಾವಿರಾರು ಮಂದಿಗೆ ಉದ್ಯೋಗ ದೊರೆಯುತ್ತಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಅನಿತಾ ಭಾಸ್ಕರ್ ತಿಳಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>